ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ

ಕರ್ನಾಟಕ ಸರ್ಕಾರ

[ಕರ್ನಾಟಕ ಸರ್ಕಾರದ ಒಂದು ಸ್ವಾಯತ್ತ ಸಂಸ್ಥೆ]
ಕೆ. ಆರ್. ರಸ್ತೆ, ಕೋಟೆ, ಬೆಂಗಳೂರು – 560 002.
☏: 080-2670 0810, 🖷: 080-2670 4342.

ಇಮೇಲ್: director_bmcri@yahoo.co.in / director_dean@bmcri.org ಅಂತರ್ಜಾಲ: www.bmcri.org

ಸಂಖ್ಯೆ: ಬೆಂವೈವಿಸಂಸಂ/ನೇಕೋ/01/2012-13, ಬೆಂಗಳೂರು, ದಿನಾಂಕ:09.12.2016

## ಅಧಿಸೂಚನೆ

ವಿಷಯ: ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇಲ್ಲಿ ಖಾಲಿ ಇರುವ 375 ಶುಶ್ರೂಷಕ ಹುದ್ದೆಗಳನ್ನು ಸರ್ಕಾರದ ಮೀಸಲಾತಿ ಅನ್ವಯ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಬಗ್ಗೆ

ಉಲ್ಲೇಖ:
1. ಈ ಸಂಸ್ಥೆಯ ಅಧಿಸೂಚನೆ ಸಮ ಸಂಖ್ಯೆ ದಿನಾಂಕ:07.01.2013
2. ಸರ್ಕಾರದ ಪತ್ರ ಸಂಖ್ಯೆ ಆಕುಕ 316 ಎಂಎಂಸಿ 2015, ದಿನಾಂಕ: 08.07.2016 ರಂದು 400 ಶುಶ್ರೂಷಕರನ್ನು ಭರ್ತಿ ಮಾಡಲು ಅನುಮತಿ ನೀಡಿರುವ ಬಗ್ಗೆ.

*** ** ** ***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಸಂಸ್ಥೆಯ ಶುಶ್ರೂಷಕರ ಹುದ್ದೆಗಳನ್ನು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕ ಮತ್ತು ಮೌಖಿಕ ಸಂದರ್ಶನದಲ್ಲಿ ಪಡೆದ ಅಂಕಗಳನ್ನು ಒಟ್ಟುಗೂಡಿಸಿ ಸರ್ಕಾರದ ಮೀಸಲಾತಿ ಮತ್ತು ಒಳ ಮೀಸಲಾತಿ ಹಾಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶ ಮೀಸಲಾತಿ ನಿಯಮದಂತೆ ಉಳಿದ ವೃಂದ ಹಾಗೂ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು (Provisional Selection List) ಮತ್ತು ಹೆಚ್ಚುವರಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು (Additional Provisional Selection List) ಅರ್ಜಿದಾರರ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯಿಂದ ಬಾಧಿತರಾಗುವ ಅಭ್ಯರ್ಥಿಗಳು ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಸೂಕ್ತ ದಾಖಲೆಗಳ ಸಮೇತ **ಈ ಪಟ್ಟಿ ಪ್ರಕಟಿಸಿದ ದಿನಾಂಕ ದಿಂದ 15 ದಿನಗಳೊಳಗಾಗಿ** ನಿರ್ದೇಶಕರು ಹಾಗೂ ಡೀನ್, ಬೆಂವೈವಿಸಂಸಂ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು. ನಿಗದಿತ ಸಮಯದ ನಂತರ ಸಲ್ಲಿಸಲಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ತಾತ್ಕಾಲಿಕ ಆಯ್ಕೆ ಪಟ್ಟಿ (Provisional Selection List) ಮತ್ತು ಹೆಚ್ಚುವರಿ ತಾತ್ಕಾಲಿಕ ಆಯ್ಕೆ ಪಟ್ಟಿ (Additional Provisional Selection List) ಯಲ್ಲಿರುವ ಅಭ್ಯರ್ಥಿಗಳ ಆಯ್ಕೆಯು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಈ ತಾತ್ಕಾಲಿಕ ಮತ್ತು ಹೆಚ್ಚುವರಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅಭ್ಯರ್ಥಿಗಳ ಹೆಸರನ್ನು ಸೇರಿಸಿರುವ ಕಾರಣದಿಂದಾಗಿಯೇ ಯಾವುದೇ ಅಭ್ಯರ್ಥಿಗೆ ನೇಮಕಾತಿ ಹಕ್ಕು ಪ್ರಾಪ್ತವಾಗುವುದಿಲ್ಲ.
2. ಯಾವುದೇ ಅಭ್ಯರ್ಥಿಯು ಆಯ್ಕೆಗೆ ಅನರ್ಹ ಎಂದು ಕಂಡುಬಂದಲ್ಲಿ, ಆಯ್ಕೆ ಸಮಿತಿಯು ಅಂತಹ ಅಭ್ಯರ್ಥಿಯ ಆಯ್ಕೆಯನ್ನು ಪುನರ್ ಪರಿಶೀಲಿಸಿ ತಿರಸ್ಕರಿಸುವ ಹಕ್ಕು ಹೊಂದಿರುತ್ತದೆ.

9/12/16

ನಿರ್ದೇಶಕರು ಹಾಗೂ ಡೀನ್,
ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ
ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.

ಪ್ರಕಟಣೆಗಾಗಿ :- ಸೂಚನಾ ಫಲಕ ಹಾಗೂ ಸಂಸ್ಥೆಯ ಅಂತರ್ಜಾಲದಲ್ಲಿ ಪ್ರಕಟಣೆಗಾಗಿ.